ಅಥವಾ ರಾಷ್ಟ್ರೀಯ ತೋಟಗಾರಿಕೆ ಮಂಡಳಿಯ ಯೋಜನೆಯಡಿ ಆರ್ಥಿಕ ನೆರವು ನೀಡಿ ಪ್ರೋತ್ಸಾಹಿಸಲಾಗುವುದು.

ಆ) ಸಂಘ ಸಂಸ್ಥೆಗಳು ಅಥವಾ ಖಾಸಗಿಯವರು ಆಸಕ್ತಿ ತೋರಿದ ತಕ್ಷಣ ಶೀಥಲಕೇಂದ್ರ ಸ್ಥಾಪನೆಗಾಗಿ ಕ್ರಮ ತೆಗೆದುಕೊಳ್ಳಲಾಗುವುದು.

ಇ) ಅವಶ್ಯಕತೆಯಿರುವ ಎಲ್ಲಾ ಪ್ರದೇಶಗಳಲ್ಲಿ ಶೀಥಲಗೃಹಗಳನ್ನು ತೆರೆಯಲು ಪ್ರೋತ್ಸಾಹಿಸಲಾಗುವುದು.

ಈ) ಶೀಥಲಗೃಹ ತೆರೆಯಲು ಅಸಕ್ತರು ಮುಂದೆ ಬಂದ ಕೂಡಲೆ ತಜ್ಞರ ಕಾರ್ಯಸಾಧ್ಯತೆ ವರದಿಯನ್ನು ಆಧರಿಸಿ ಶೀಥಲಗೃಹದ ಸ್ಥಳವನ್ನು ನಿರ್ಧರಿಸಲಾಗುವುದು.

ತೋಟಗಾರಿಕಾ ಮಿಶನ್‌ಗೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಹಣ

331 (1669) ಶ್ರೀ ಶಿವಾನಂದ ಎಸ್. ಪಾಟೀಲ್ (ಬಸವನ ಬಾಗೇವಾಡಿ): ಮಾನ್ಯ ತೋಟಗಾರಿಕೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ರಾಜ್ಯದಲ್ಲಿ ತೋಟಗಾರಿಕಾ ಮಿಷನ್ ಜಾರಿಯಾಗಿರುವ ಹಿನ್ನಲೆಯಲ್ಲಿ ಕೇಂದ್ರ ಸರ್ಕಾರ ರಾಜ್ಯಕ್ಕೆ ಬಿಡುಗಡೆ ಮಾಡಿರುವ ಹಣದ ಮೊತ್ತ ಎಷ್ಟು ;

ಆ) ಈ ಸರ್ಕಾರ ಹಣವನ್ನು ಸದ್ಬಳಕೆ ಮಾಡಿ ಕೇಂದ್ರ ಸರ್ಕಾರಕ್ಕೆ ಬಳಕೆ ಪ್ರಮಾಣ ಪತ್ರವನ್ನು ಇಲಾಖೆಯಿಂದ ಕಳುಹಿಸಲಾಗಿದೆಯೇ ;

ಇ) ಹೆಚ್ಚಿನ ಹಣ ಬಿಡುಗಡೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ; ಹಾಗಿದ್ದಲ್ಲಿ, ಆ ಪ್ರಸ್ತಾವನೆಯ ಮೊತ್ತವೆಷ್ಟು ?

ಶ್ರೀ ಶಶಿಕಾಂತ ಅಕ್ಕಪ್ಪ ನಾಯಕ (ತೋಟಗಾರಿಕೆ ಸಚಿವರು):

ಅ) ಕೇಂದ್ರ ಸರ್ಕಾರವು ರಾಜ್ಯಕ್ಕೆ ರೂ.54.55 ಕೋಟಿಗಳನ್ನು ಬಿಡುಗಡೆ ಮಾಡಿರುತ್ತದೆ.

ಆ) ಹೌದು.

2005–06ನೇ ಸಾಲಿನಲ್ಲಿ ರೂ.44.55 ಕೋಟಿಗಳನ್ನು ಬಿಡುಗಡೆ ಮಾಡಲಾಗಿದ್ದು, ಆರಂಭಿಕ ವರ್ಷವಾಗಿದ್ದುದರಿಂದ ಮಾರ್ಚ್ 2006ರವರೆಗೆ ರೂ.14.92 ಕೋಟಿಗಳನ್ನು ವಿನಿಯೋಗಿಸಿ ಬಳಕೆ ಪ್ರಮಾಣ ಪತ್ರವನ್ನು ಕಳುಹಿಸಲಾಗಿದೆ. ಉಳಿದ ಅನುದಾನವು ಕೈಬಿಟ್ಟುಹೋಗುವುದಿಲ್ಲ (does not lapse). 2006-07ನೇ ಸಾಲಿನಲ್ಲಿ ಕೇಂದ್ರವು ರೂ.10.00 ಕೋಟಿಗಳನ್ನು

ಬಿಡುಗಡೆ ಮಾಡಿದೆ. ಈ ಎಲ್ಲ ಹಣವನ್ನು ಸದ್ಬಳಕೆ ಮಾಡಲು ಕ್ರಮ ಕೈಗೊಳ್ಳಲಾಗಿದೆ.

ಇ) ಹೌದು. 2006-07ನೇ ಸಾಲಿನ ಕಾರ್ಯಕ್ರಮಗಳಿಗಾಗಿ ರೂ.90.51 ಕೋಟಿಗಳ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.

ಸುಭಾಶ್ ಪಾಲೇಕರ್ ಕೃಷಿ ಪದ್ಧತಿ

332 (688) ಶ್ರೀ ಡಿ.ಆರ್. ಪಾಟೀಲ್ (ಗದಗ) : ಮಾನ್ಯ ಕೃಷಿ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ರಾಜ್ಯದಲ್ಲಿ ಶೂನ್ಯ ಬಂಡವಾಳ ಹೂಡಿಕೆಯ ಸುಭಾಷ್ ಪಾಳೇಕರ್ ಕೃಷಿ ಪದ್ದತಿ ಜನಪ್ರಿಯಗೊಳಿಸಲು ಸರ್ಕಾರ ಚಿಂತನೆ ನಡೆಸಿದೆಯೇ;

ಆ) ನಡೆಸಿದ್ದಲ್ಲಿ, ಈ ಪದ್ಧತಿ ಜನಪ್ರಿಯಗೊಳಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಕೊಳ್ಳುವುದು ;

ಇ) ಅತಿಯಾದ ರಾಸಾಯನಿಕಗಳ ಬಳಕೆಯಿಂದ ಭೂಮಿ ಬರಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಈ) ಬಂದಿದ್ದಲ್ಲಿ, ಇದನ್ನು ತಡೆಯಲು ಸರ್ಕಾರ ಯಾವ ಕ್ರಮಗಳನ್ನು ಕೈಕೊಳ್ಳುವುದು ;

ಉ) ರಾಜ್ಯ ಅಂಗೀಕರಿಸುವ ನೈಸರ್ಗಿಕ ಕೃಷಿ ಪದ್ಧತಿಯನ್ನು ಜನಪ್ರಿಯ ಗೊಳಿಸಲು ಕೃಷಿ ವಿಶ್ವವಿದ್ಯಾನಿಲಯಗಳನ್ನು ಸಜ್ಜುಗೊಳಿಸಲಾಗಿದೆಯೇ, ಹಾಗಿದ್ದಲ್ಲಿ, ಕೈಕೊಂಡಿರುವ ಕ್ರಮಗಳೇನು ?

ಶ್ರೀ ಬಂಡೆಪ್ಪ ಕಾಶಂಪೂರ್ (ಕೃಷಿ ಸಚಿವರು) –

ಅ) ಹೌದು.

ಆ) ಸುಭಾಷ್ ಪಾಳೇಕರ್ ನೈಸರ್ಗಿಕ ಕೃಷಿ ಪದ್ಧತಿಯ ಪ್ರೋತ್ಸಾಹಕ್ಕೆ ಸಂಬಂಧಿಸಿದಂತೆ ಸರ್ಕಾರ ಈಗಾಗಲೇ ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುತ್ತದೆ.

1. ಧಾರವಾಡ ಕೃವಿವಿ ಹಾಗೂ ಚಿತ್ರದುರ್ಗ ಮತ್ತು ಮಂಡ್ಯ ಜಿಲ್ಲೆಗಳ 100 ಹೆಕ್ಟೇರ್ ಕ್ಷೇತ್ರದಲ್ಲಿ ಶ್ರೀ ಸುಭಾಷ್ ಪಾಳೇಕರ್‌ರವರ ಕೃಷಿ ಪದ್ಧತಿಯನ್ನು ಪ್ರಾಯೋಗಿಕವಾಗಿ ಅಳವಡಿಸುವುದು.

2. ನೈಸರ್ಗಿಕ ಕೃಷಿ ಬಗ್ಗೆ ರೈತರಿಗೆ ತಿಳುವಳಿಕೆ ನೀಡುವುದು.